# ಕರ್ನಾಟಕ ವಿಧಾನ ಪರಿಷತ್ತು

**ನೂರ ನಲವತ್ತಮೂರನೆಯ ಅಧಿವೇಶನ**
**(ಮುಂದುವರೆದ ಉಪವೇಶನ)**
**ಕಾರ್ಯಕಲಾಪಗಳ ಪಟ್ಟಿ**
**ಮಂಗಳವಾರ, ದಿನಾಂಕ: 09ನೇ ಮಾರ್ಚ್, 2021**
**(ಸಮಯ: ಬೆಳಗ್ಗೆ: 11.00 ಗಂಟೆಗೆ)**

* * *

## 01. ಸಂತಾಪ ಸೂಚನೆಗಳು

## 02. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಒಂಭತ್ತನೆಯ ಪಟ್ಟಿ

ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಒಂಭತ್ತನೆಯ ಪಟ್ಟಿ

## 03. ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು

ಮಾನ್ಯ ಸದಸ್ಯರುಗಳಿಗೆ ಈಗಾಗಲೇ ಒದಗಿಸಲಾಗಿರುವ ಮೂರನೇ ಮತ್ತು ನಾಲ್ಕನೇ ಪಟ್ಟಿಯ ರೀತ್ಯಾ.

## 04. ಅರ್ಜಿಗಳನ್ನೊಪ್ಪಿಸುವುದು

**ಅ) ಶ್ರೀ ಮರಿತಿಬ್ಬೇಗೌಡ** ಅವರು ಮಂಡ್ಯ ಜಿಲ್ಲೆಯ ನಾಗಮಂಗಲ ತಾಲ್ಲೂಕಿನ ಮರಡಿಪುರ ಗ್ರಾಮದಲ್ಲಿ ಒತ್ತುವರಿಯಾಗಿರುವ ಗೋಮಾಳ ಜಮೀನನ್ನು ತೆರವುಗೊಳಿಸುವ ಬಗ್ಗೆ ಅರ್ಜಿಯನ್ನು ಒಪ್ಪಿಸುವುದು.

**ಆ) ಶ್ರೀ ಎಂ.ಎ.ಗೋಪಾಲಸ್ವಾಮಿ** ಅವರು ಚಿತ್ರದುರ್ಗ ಜಿಲ್ಲೆ, ಹೊಸದುರ್ಗ ತಾಲ್ಲೂಕು, ಟೌನ್ ಪುರಸಭೆ ವ್ಯಾಪ್ತಿಯಲ್ಲಿ ಮಂಜೂರಾದ ನಿವೇಶನಗಳನ್ನು ಸಕ್ರಮಗೊಳಿಸುವ ಬಗ್ಗೆ ಅರ್ಜಿಯನ್ನು ಒಪ್ಪಿಸುವುದು.

**ಇ) ಶ್ರೀ ಮೋಹನ್ ಕುಮಾರ್ ಕೊಂಡಜ್ಜಿ** ಅವರು ಕರ್ನಾಟಕ ರಾಜ್ಯದ ಖಾಸಗಿ ಪದವಿ ಪೂರ್ವ ಕಾಲೇಜುಗಳ/ಶಿಕ್ಷಣ ಸಂಸ್ಥೆಗಳ ಮೂಲಭೂತ ಸೌಲಭ್ಯಗಳ ಕುರಿತಂತೆ 2018ರ ಆದೇಶವನ್ನು ಪೂರ್ವಾನ್ವಯವಾಗುವಂತೆ ನಿರ್ದೇಶನ ನೀಡುವ ಬಗ್ಗೆ ಅರ್ಜಿಯನ್ನು ಒಪ್ಪಿಸುವುದು

## 05. ಗಮನ ಸೆಳೆಯುವ ಸೂಚನೆಗಳು

ಅ) **ಶ್ರೀಯುತರುಗಳಾದ ಕೆ.ಟಿ. ಶ್ರೀಕಂಠೇಗೌಡ, ಮರಿತಿಬ್ಬೇಗೌಡ, ಪುಟ್ಟಣ್ಣ ಮತ್ತು ಅರುಣ ಶಹಾಪೂರ** ಅವರುಗಳು ದಿನಾಂಕ: 10.06.2020ರಂದು ಆರ್ಥಿಕ ಇಲಾಖೆಯವರು ಹೊರಡಿಸಿರುವ ಸುತ್ತೋಲೆ ಸಂಖ್ಯೆ:ಆಇ/157/ವೆಚ್ಚ-8/2020ನ್ನು ಹಿಂಪಡೆದು ವಿವಿಧ ಇಲಾಖೆಗಳಲ್ಲಿ ಖಾಲಿಯಿರುವ ಹುದ್ದೆಗಳನ್ನು ಭರ್ತಿ ಮಾಡುವ ಹಾಗೂ ವೇತನಾನುದಾನಕ್ಕೆ ಒಳಪಡಿಸುವ ಬಗ್ಗೆ ಮಾನ್ಯ ಮುಖ್ಯಮಂತ್ರಿಗಳ ಗಮನ ಸೆಳೆಯುವುದು.

ಆ) **ಶ್ರೀ ಎಂ.ನಾರಾಯಣಸ್ವಾಮಿ, ವಿಧಾನ ಪರಿಷತ್ತಿನ ವಿರೋಧ ಪಕ್ಷದ ಮುಖ್ಯ ಸಚೇತಕರು,** ಬೆಂಗಳೂರು ಪೂರ್ವ ತಾಲ್ಲೂಕಿನ ಕೆ.ಆರ್. ಪುರಂ ವಾರ್ಡ್ ಸಂಖ್ಯೆ 53ನೇ ವ್ಯಾಪ್ತಿಯ ಬಸವನಪುರ ಗ್ರಾಮದ ಸರ್ವೆ ನಂ.26/01ರಲ್ಲಿ ನಾಲ್ಕು ಎಕರೆ ವಿಸ್ತೀರ್ಣದ ಜಮೀನಿಗೆ ಸಂಬಂಧಿಸಿದಂತೆ ನ್ಯಾಯಾಲಯದಲ್ಲಿ ದಾವೆ ಇದ್ದರು ಅಲ್ಲಿನ ಜಿಲ್ಲಾಧಿಕಾರಿಗಳು ಕಾನೂನು ಬಾಹಿರವಾಗಿ ಭೂಪರಿವರ್ತನೆ ಆದೇಶ ಹೊರಡಿಸಿರುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

## 06. ನಿಯಮ 330ರ ಮೇರೆಗೆ

ಅ) **ಶ್ರೀ ಬಸವರಾಜ ಪಾಟೀಲ್ ಇಟಗಿ** ಅವರು ಬಳ್ಳಾರಿ ಜಿಲ್ಲೆಯ ಹೂವಿನಹಡಗಲಿ ತಾಲ್ಲೂಕಿನ ಪ್ರಾಥಮಿಕ ಶಾಲಾ ಶಿಕ್ಷಕರ ವೈದ್ಯಕೀಯ ವೆಚ್ಚದ ಬಿಲ್ಲುಗಳನ್ನು ಮರುಪಾವತಿಸುವಲ್ಲಿ ವಿಳಂಬವಾಗಿರುವ ಕುರಿತು ಪ್ರಸ್ತಾಪಿಸುವುದು.

ಆ) **ಡಾ: ವೈ.ಎ. ನಾರಾಯಣಸ್ವಾಮಿ** ಅವರು ಕೋಲಾರ ಜಿಲ್ಲೆಯ ಕೆರೆಗಳಿಗೆ ಸಂಸ್ಕರಿಸಿದ ನೀರನ್ನು ತುಂಬಿಸಲು ರೂಪಿಸಿರುವ ಕೆ.ಸಿ.ವ್ಯಾಲಿ ಯೋಜನೆಯಡಿಯಲ್ಲಿ ನೂರಾರು ಕೋಟಿ ರೂಗಳನ್ನು ವೆಚ್ಚ ಮಾಡಿದ್ದರೂ ನಿರೀಕ್ಷಿತ ಪ್ರಮಾಣದಲ್ಲಿ ಕೆರೆಗಳಿಗೆ ನೀರನ್ನು ತುಂಬಿಸಲು ಆಗದಿರುವ ವಿಷಯದ ಕುರಿತು ಪ್ರಸ್ತಾಪಿಸುವುದು.

## 07. ನಿಯಮ 68ರ ಮೇರೆಗೆ ಸಾರ್ವಜನಿಕ ಮಹತ್ವದ ವಿಷಯದ ಮೇಲೆ ಚರ್ಚೆ

| | |
|---|---|
| **ಶ್ರೀಯುತರುಗಳಾದ:**<br>ಕೆ.ಟಿ.ಶ್ರೀಕಂಠೇಗೌಡ, ಮರಿತಿಬ್ಬೇಗೌಡ, ಕೆ.ಎ.ತಿಪ್ಪೇಸ್ವಾಮಿ ಮತ್ತು ಎಸ್.ಎಲ್. ಭೋಜೇಗೌಡ ಅವರುಗಳು | ತಮಿಳುನಾಡು ಸರ್ಕಾರವು ಕಾವೇರಿ ನದಿ ಪಾತ್ರದಲ್ಲಿನ ಮಾಯನೂರು ಜಲಾಶಯವನ್ನು ಅಕ್ರಮವಾಗಿ ಬಳಸಿಕೊಂಡಿರುವ ಕುರಿತು |

## 08. ವಿತ್ತೀಯ ಕಾರ್ಯಕಲಾಪ

2021-22ನೇ ಸಾಲಿನ ಆಯವ್ಯಯ ಅಂದಾಜುಗಳ ಮೇಲಿನ ಸಾಮಾನ್ಯ ಚರ್ಚೆ

...3

**09. ಅರ್ಧ ಗಂಟೆ ಕಾಲಾವಧಿ ಚರ್ಚೆ**

ಮಣ್ಣಿನ ಫಲವತ್ತತೆಗೆ ಸಂಬಂಧಿಸಿದಂತೆ ಪ್ರತಿ ಜಿಲ್ಲೆಯಲ್ಲೂ ಮಣ್ಣಿನ ಪರೀಕ್ಷಾ ಪ್ರಯೋಗಾಲಯ ಹಾಗೂ ಸಂಚಾರಿ ಮಣ್ಣಿನ ಪರೀಕ್ಷಾ ಪ್ರಯೋಗಾಲಯವನ್ನು ಸ್ಥಾಪಿಸಿ, ಮಣ್ಣಿನ ಆರೋಗ್ಯ ಕಾರ್ಡ್ ವಿತರಣೆ ಮಾಡುವ ಯೋಜನೆಯ ಬಗ್ಗೆ ದಿನಾಂಕ:03.02.2021ರ ಚುಕ್ಕೆ ಗುರುತಿನ **ಪ್ರಶ್ನೆ ಸಂಖ್ಯೆ:306ಕ್ಕೆ** ನೀಡಿದ ಉತ್ತರದಿಂದಾಗಿ ಉದ್ಭವಿಸಿದ ವಿಷಯದ ಕುರಿತು **ಶ್ರೀ ಕೆ.ಎ.ತಿಪ್ಪೇಸ್ವಾಮಿ** ಅವರಿಂದ ಅರ್ಧ ಗಂಟೆ ಕಾಲಾವಧಿ ಚರ್ಚೆ

**ಎಸ್. ನಿರ್ಮಲ**
**ಜಂಟಿ ಕಾರ್ಯದರ್ಶಿ**

---

**ಪ್ರತಿ ದಿನದ ವಿಧಾನ ಪರಿಷತ್ತಿನ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.**
**www.kla.kar.nic.in/council/council.htm**